ಮೈಸೂರ ಗೆಜೆಟ್.

ನಂ. 42.] ಸರ್ಕಾರದಿಂದ ಘಾಯಿಷ್. ಆದ್ದು [ನಂ. 2.

ಬೆಂಗಳೂರು, ಗುರುವಾರ, ಜನವರಿ ತಾ॥ 10, ಸ್ ೧೯೦೭.

☞ ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೆ ಭಾಗ—ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾವ ಇಸ್ತಿಹಾರ್ನಾಮೆಗಳು.

2ನೆ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೆ ವ ಇನಾಂ ಸೂಪರಿಂಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಂಟ್ರೋಲರವರು, ಪಬ್ಲಿಕ್‌ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟ್ರು, ರೆಜಿಸ್ಟ್ರೇರ್ಸ ವ ಎಡ್ಯುಕೇರ್ಸ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್‌ಬೋರ್ಡು ಪ್ರಸಿಡೆಂಟರು ಡಿಸ್ಟ್ರಿಕ್ಟು ವ ಸೆರ್ಷ ಜಡ್ಜಿರು, ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೊಲೀಸ್ ಸೂಪರಿಂಟೆಂಡೆಂಟರು, ಫಾರೆಸ್ಟ್ರು ಆಫಿಸರ್‌ಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ ಕಾಲಸ್ಟ್ಕೀ ರಿಪೋರ್ಟುಗಳು; ಪ್ರೋಸ್ಪ್ಟಸ್ ನೋಟಿಸ್‌ಗಳು.

3ನೆ ಭಾಗ—ಲೆಜಿಸ್‌ಲೇಟಿವ್ ರೆಗ್ಯುಲೇರ್ಷಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು.

4ನೆ ಭಾಗ—ಸರ್ಕಾರೀ ಕಾಗದ ಪತ್ರಗಳು.

I ನೆ ಭಾಗ.

ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾವ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 18ನೆ ಡಿಸೆಂಬರ್ 1906.

ನಂ. 5265—ಸ್ಯಾನಿಟರಿ 66—06—20, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಿ ಪಡಿಸುವುದೇನಂದರೆ :—ಹಾಸನ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶಗಳು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇರ್ಷ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್ನಾಮೆಗಳೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶಗಳೆಂದು ಎಣಿಸಲ್ಪಡುವವು.

ಸ್ಥಳ.	ತಾಲ್ಲೂಕು
ಬಿನ್ನೂರು	ಬೇಲೂರು.
ಹೊಸಕೊಪ್ಪಲು	ಹಾಸನ.
ಉದ್ದೂರು	ಡಿಟೋ